ದಾಸಾನ್‌ಪುರದ ಹೋಬಳಿಯಲ್ಲಿರುವ ಆಸ್ಪತ್ರೆಗಳ ಸ್ಥಿತಿ

268 (144) ಶ್ರೀ ಅಂಜನಮೂರ್ತಿ (ನೆಲಮಂಗಲ):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

1) ಬೆಂಗಳೂರು ಉತ್ತರ ತಾಲ್ಲೂಕು ದಾಸನಪುರ ಹೋಬಳಿಯಲ್ಲಿರುವ ಸಾರ್ವಜನಿಕ ಆಸ್ಪತ್ರೆಗಳು(ಸೊಂಟೆಕೊಪ್ಪ ಮತ್ತು ಮಾಕಳಿ ಗ್ರಾಮಗಳಲ್ಲಿರುವ) ಸಣ್ಣ ಕೊಠಡಿಯಲ್ಲಿ ಯಾವ ಸೌಲಭ್ಯವೂ ಇಲ್ಲದೇ ಕಾರ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2) ಹಾಗಿದ್ದಲ್ಲಿ ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-

1) ಹೌದು.

2) ಸದರಿ ಆಸ್ಪತ್ರೆಗಳು ಜಿಲ್ಲಾಪರಿಷತ್ ಆಡಳಿತ ವ್ಯಾಪ್ತಿಯಲ್ಲಿ ಬರುವುದರಿಂದ ಬೆಂಗಳೂರು ಗ್ರಾಮಾಂತರ ಜಿಲ್ಲಾಪರಿಷತ್ತು ಕ್ರಮ ಕೈಗೊಳ್ಳಬೇಕಾಗುತ್ತದೆ.

ಹರಿಜನ ಗಿರಿಜನರಿಗೆ ಸೇರಿದ ವಿದ್ಯಾರ್ಥಿನಿಲಯಗಳ ದುಸ್ಥಿತಿ ಬಗ್ಗೆ

269 (143) ಶ್ರೀ ಅಂಜನಮೂರ್ತಿ (ನೆಲಮಂಗಲ):- ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ರಾಜ್ಯದಲ್ಲಿ ಹರಿಜನ ಗಿರಿಜನರ ವಿದ್ಯಾರ್ಥಿನಿಲಯಗಳು ಬಹಳ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಏನು ಕ್ರಮ ಕೈಗೊಂಡಿದೆ?

ಇ) ಅನೇಕ ಕಡೆಗಳಲ್ಲಿ ಸ್ವಂತ ಕಟ್ಟಡಗಳಿಲ್ಲದೆ ಸಣ್ಣ ಕೊಠಡಿಗಳಲ್ಲಿ ವಿದ್ಯಾರ್ಥಿನಿಲಯಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ, ಸ್ವಂತ ಕಟ್ಟಡ ಕಟ್ಟಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು):-

ಅ) ಬಂದಿದೆ.

ಆ) ದುರಸ್ತಿಗಾಗಿ ರೂ. 3.00 ಕೋಟಿಯನ್ನು ಮೀಸಲಿಡಲಾಗಿದೆ.

ಇ) ಹೌದು.

ಈ) ಹಂತಹಂತವಾಗಿ ಸ್ವಂತ ಕಟ್ಟಡ ಕಟ್ಟಲು ಕ್ರಮ ಕೈಗೊಳ್ಳಲಾಗುವುದು.

ಕಳ್ಳಂಬೆಳ ಕ್ಷೇತ್ರದಲ್ಲಿರುವ ಆಸ್ಪತ್ರೆಗಳಲ್ಲಿ ವೈದ್ಯರಿಲ್ಲದೆ ಆಸ್ಪತ್ರೆಗಳನ್ನು ಮುಚ್ಚಿರುವುದು

273 (249) ಶ್ರೀ ಟಿ. ಬಿ. ಜಯಚಂದ್ರ (ಕಳ್ಳಂಬೆಳ):-ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ಕಳ್ಳಂಬೆಳ ಕ್ಷೇತ್ರದಲ್ಲಿ ಯಳನಾಡು, ನೇರಲಗುಡ್ಡದಲ್ಲಿ ವೈದ್ಯರಿಲ್ಲದೆ ಆಸ್ಪತ್ರೆಗಳನ್ನು ಮುಚ್ಚಿರುವುದು ಮತ್ತು ಹಾಗಲವಾಡಿ, ಅಳಲುಘಟ್ಟಗಳಲ್ಲಿ ವೈದ್ಯರಿದ್ದು ಪ್ರಯೋಜನವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;